# ಗ್ರಾಮ ಪಂಚಾಯತ ಕಾರ್ಯಾಲಯ ಅವೇಡಾ – 581365

ದೂರವಾಣಿ ಸಂಖ್ಯೆ : 08383-256683 Email aveda.sup.utt@gmail.com


ರಿಗೆ,

ಸನ್ಮಾನ್ಯ ಶ್ರೀ ಬಿ. ಎಸ್ ಯಡಿಯೂರಪ್ಪ ಮಾನ್ಯ ಮುಖ್ಯಮಂತ್ರಿಗಳು,
ಕರ್ನಾಟಕ ಸರ್ಕಾರ, ವಿಧಾನ ಸೌಧ, ಬೆಂಗಳೂರು.

ವಿಷಯ: ಗ್ರಾಮ ಪಂಚಾಯತ್‌ಗಳಿಗೆ ಆಡಳಿತಾಧಿಕಾರಿಗಳು ಅಥವಾ ಆಡಳಿತ ಸಮಿತಿಯ ನೇಮಕದ ಬದಲಿಗೆ ಹಾಲಿ ಇರುವ ಚುನಾಯಿತ ಪ್ರತಿನಿಧಿಗಳನ್ನೇ ಚುನಾವಣೆ ನಡೆಯುವವರೆಗೆ ಮುಂದುವರೆಸುವ ಬಗ್ಗೆ ಒತ್ತಾಯಿಸಿ ಪತ್ರ.

ಇಡೀ ದೇಶದ್ಯಂತ ವ್ಯಾಪಕವಾಗಿ ಹರಡುತ್ತಿರುವ ಕೋವಿಡ್–19ರ ಪರಿಣಾಮ ಕರ್ನಾಟಕದ ಮೇಲೂ ಆಗಿರುವುದರಿಂದ ರಾಜ್ಯದಲ್ಲಿನ ಆಡಳಿತ ವ್ಯವಸ್ಥೆಯಲ್ಲಿ ವಿವಿಧ ರೀತಿಯ ಬದಲಾವಣೆಗಳವೆ. ಇದರ ಪರಿಣಾಮ, ಕರ್ನಾಟಕದಲ್ಲಿ, ಇದೇ ಮೇ ತಿಂಗಳ ಅಂತ್ಯದೊಳಗೆ ನಡೆಯಬೇಕಿದ್ದ ಗ್ರಾಮ ಪಂಚಾಯತ್ ಚುನಾವಣೆಯ ಮೇಲೂ ಉಂಟಾಗಿದೆ. ಈ ಕೋವಿಡ್–19ರ ಸಂಕಷ್ಟದ ಸಮಯದಲ್ಲಿ ಚುನಾವಣೆಯಂತಹ ಕಾರ್ಯವನ್ನು ಕೈಗೆತ್ತಿಕೊಳ್ಳುವುದು ಅಸಾಧ್ಯವೇಸರಿ. ಈ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರ ಈಗಾಗಲೇ ಹೇಳಿರುವಂತೆ ಸುಮಾರು 6 ತಿಂಗಳುಗಳ ಕಾಲ ಚುನಾವಣೆ ಮುಂದೂಡಬೇಕಾಗಿರುವುದು ಅನಿಯಾರ್ಯವಾಗಿದೆ. ಆದರೆ ಆಡಳಿತಾಧಿಕಾರಿಯ ನೇಮಕ ಅಥವಾ ಬೇರ್‍ಯಾವುದೋ ಉಸ್ತುವಾರಿ ಸಮಿತಿ ನೇಮಕ ಮಾಡುವ ಸರ್ಕಾರದ ಆಲೋಚನೆ ಕಾನೂನಿನಲ್ಲಿ ಅವಕಾಶವಿದ್ದರೂ ಈ ವಿಕೋಪದ ಪರಿಸ್ಥಿತಿ ಇರುವಾಗ ಸೂಕ್ತವಾದುದಲ್ಲ. ಚುನಾಯಿತ ಪ್ರತಿನಿಧಿಗಳು ಹಾಗೂ ಅಧಿಕಾರಿಗಳು ಸರ್ಕಾರದ ರಥದ ಎರಡು ಗಾಲಿಗಳಿದ್ದಂತೆ. ಸರ್ಕಾರದ ರಥ ಮುನ್ನಡೆಸುವಲ್ಲಿ ಇಬ್ಬರ ಪಾತ್ರವೂ ಬಹಳ ಪ್ರಮುಖವಾದುದ್ದು ಗ್ರಾಮ ಪಂಚಾಯತ್ ಒಂದು ಸ್ಥಳೀಯ ಸ್ವಯಂ ಸರ್ಕಾರ. ಹೀಗಾಗಿಯೇ ಇಡೀ ರಾಜ್ಯದಾದ್ಯಂತ ಕೋವಿಡ್–19ರ ಪರಿಸ್ಥಿತಿ ಘೋಷಣೆಯ ಆದಾಗ ಮೊಟ್ಟಮೊದಲು ಸರ್ಕಾರ ಮಾಡಿದ ಕೆಲಸವೆಂದರೆ ಪಂಚಾಯತ್ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುವ ಎಲ್ಲಾ ಇಲಾಖೆಗಳ, ಸ್ವಯಂಸೇವಾ ಸಂಸ್ಥೆಗಳ, ಸ್ವಯಂಸೇವಕರ ಸಂಯೋಜನೆಯಲ್ಲಿ ಜಾರಿ ಪಡೆ (ಕಾರ್ಯಪಡೆ) ರೂಪಿಸಿ ಇಡೀ ಪಂಚಾಯತ್‌ನ ವಿಕೋಪ ನಿರ್ವಹಣೆಯ ಜವಾಬ್ದಾರಿಯ ನೇತೃತ್ವವನ್ನು ಗ್ರಾಮ ಸರ್ಕಾರಕ್ಕೆ ನೀಡಿದ್ದು ಚುನಾಯಿತ ಪ್ರತಿನಿಧಿಗಳಾದ ನಾವು ಪಂಚಾಯತ್ ಆಡಳಿತದಲ್ಲಿ ಸಕ್ರೀಯವಾಗಿ ಭಾಗವಹಿಸಿ ಅನುಭವ ಪಡೆದು ಗ್ರಾಮ ಪಂಚಾಯತ್ ಅಭಿವೃದ್ಧಿಯಲ್ಲಿ ನಮ್ಮ ಪಾತ್ರ ಜವಾಬ್ದಾರಿಗಳ ಮಹತ್ವವನ್ನು ಆಳವಾಗಿ ಅರ್ಥೈಸಿಕೊಂಡಿದ್ದರಿಂದ ವಿಕೋಪದ ಪರಿಸ್ಥಿತಿಯನ್ನೂ ಸಹ ನಿಭಾಯಿಸಲು ಸ್ಥಳೀಯ ಸರ್ಕಾರವಾಗಿ ನಮಗೆ ಸಾಧ್ಯವಾಯಿತು. ಈ ಸಂದರ್ಭದಲ್ಲಿ ಗ್ರಾಮೀಣ ಜನರ ಅಗತ್ಯತೆಗಳೇನು, ಇಲ್ಲಿನ ಪರಿಸ್ಥಿತಿ ಹೇಗಿದೆ, ಆಗಬೇಕಾದ ಪ್ರಮುಖ ಕಾರ್ಯಗಳೇನು, ಮುಂದಿರುವ ಸವಾಲುಗಳೇನು ಎಂಬುದನ್ನು ಕೂಲಂಕುಷವಾಗಿ ಗಮನಿಸಿದೇವೆ. ಒಂದು ರೀತಿಯಲ್ಲಿ ತುರ್ತು ಪರಿಸ್ಥಿತಿಯಂತೆ ಇರುವ ಈ ಸಮಯದಲ್ಲಿ ನಾವು ಸ್ಥಳೀಯ ಸರ್ಕಾರದ ಅವಿಭಾಜ್ಯ ಅಂಗವಾಗಿ, ವಿಕೋಪವನ್ನು ಸಮರ್ಥವಾಗಿ ನಿಭಾಯಿಸುವಲ್ಲಿ ಜನರ ಸಂಕಷ್ಟಗಳಿಗೆ ಸ್ಪಂದಿಸುವಲ್ಲಿ ಉತ್ತರದಾಯಿಯಾಗಿ ಕಾರ್ಯನಿರ್ವಹಿಸರುತ್ತೇವೆ. ಚುನಾಯಿತ ವರ್ಗ ಹಾಗೂ ಅಧಿಕಾರಿ ವರ್ಗ ಒಗ್ಗೂಡಿ ಆಡಳಿತ ನಡೆಸಿರುವುದೇ ಈ ಪರಿಸ್ಥಿತಿಯ ಸಮರ್ಪಕ ನಿರ್ವಹಣೆಗೆ ಪ್ರಮುಖ ಕಾರಣ. ಈ ವಿಕೋಪದ ಪರಿಸ್ಥಿತಿ ಇನ್ನೂ ಮುಂದುವರಿಯುತ್ತಿರುವ

ಈ ಸವಾಲಿನ ಸಮಯದಲ್ಲಿ, ಪಂಚಾಯತ್ ಆಡಳಿತಕ್ಕೆ ಕೇವಲ ಆಡಳಿತಾಧಿಕಾರಿಯ ಅಥವಾ ಉಸ್ತುವಾರಿ ಸಮಿತಿಯ ನೇಮಕ ಅಸಮಂಜಸವಾದುದು. ತಮ್ಮ ಸರ್ಕಾರದ ಈ ಆಲೋಚನೆ, ನಿರ್ಧಾರವನ್ನು ತಕ್ಷಣವೇ ಕೈ ಬಿಟ್ಟು, ಪ್ರಸ್ತುತ ಇರುವ ಚುನಾಯಿತ ಪ್ರತಿನಿಧಿಗಳನ್ನು ಒಳಗೊಂಡಿರುವ ಸ್ಥಳೀಯ ಸರ್ಕಾರವನ್ನೇ ಮಧ್ಯಂತರ ಸ್ಥಳೀಯ ಸ್ವಯಂ ಸರ್ಕಾರವಾಗಿ ಮುಂದುವರಿಸಬೇಕಾಗಿ ಈ ಮೂಲಕ ಕರ್ನಾಟಕ ರಾಜ್ಯ ಸರ್ಕಾರವನ್ನು ಒತ್ತಾಯಿಸಿ ನಮ್ಮ ಪಂಚಾಯತ್‌ನ ಸಾಮಾನ್ಯ ಸಭೆಯ ನಿರ್ಣಯವನ್ನು ಮಂಡಿಸುತ್ತಿದ್ದೇವೆ. ಇದೇ ಪಂಚಾಯತ್‌ನ ಜನರಿಂದ ಚುನಾಯಿತರಾದ ನಾವು ಸ್ಥಳೀಯ ಸರ್ಕಾರದ ಭಾಗವಾಗಿ ನಮ್ಮ ಗ್ರಾಮದ ಜನರಿಗೆ, ಗ್ರಾಮದ ಅಭಿವೃದ್ಧಿಗೆ ಬದ್ಧರಾಗಿದ್ದೇವೆ.

ಅಧ್ಯಕ್ಷರು
ಗ್ರಾಮ ಪಂಚಾಯತ್ ಅವೇಡಾ
ಜೋಯಿಡಾ ತಾ// ಉತ್ತರ ಕನ್ನಡ ಜಿ//

ಗ್ರಾಮ ಪಂಚಾಯತ್ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸರ್ವ ಸದಸ್ಯರು ಅವೇಡಾ ಗ್ರಾಮ ಪಂಚಾಯತ್ ಜೋಯಿಡಾ ತಾಲೂಕು, ಉತ್ತರ ಕನ್ನಡ ಜಿಲ್ಲೆ.

ಸ್ಥಳ: ಅವೇಡಾ
ದಿನಾಂಕ:09/05/2020

ಉಪಾಧ್ಯಕ್ಷರು
ಗ್ರಾಮ ಪಂಚಾಯತ್ ಅವೇಡಾ
ಜೋಯಿಡಾ ತಾ// ಉತ್ತರ ಕನ್ನಡ ಜಿ//

ಯಥಾ ಪ್ರತಿ:

- ಮಾನ್ಯ ಸಚಿವರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಕರ್ನಾಟಕ ಸರ್ಕಾರ
- ಹೆಚ್ಚುವರಿ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ
- ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಕರ್ನಾಟಕ ಸರ್ಕಾರ
- ಗ್ರಾಮ ಪಂಚಾಯತ್ ಹಕ್ಕೊತ್ತಾಯ ಆಂದೋಲನ ಕರ್ನಾಟಕ

----------ಗ್ರಾಮ ಪಂಚಾಯತ್.-------------ತಾಲೂಕು.-------------ಜಿಲ್ಲೆ

| ಕ್ರ.ಸಂ | ಹೆಸರು | ಪದನಾಮ | ಸಹಿ |
|---|---|---|---|
| 1 | ಶ್ರೀಮತಿ ಕಸ್ತೂರಿ ಬಿ ಗುಡಿ | ಅಧ್ಯಕ್ಷರು | ಕಸ್ತೂರಿ. [signature] |
| 2 | ಶ್ರೀಮತಿ ಮುಮತಾಜ ಆ ಮುಜಾವರ | ಉಪಾಧ್ಯಕ್ಷರು | |
| 3 | ಶ್ರೀಮತಿ ಚಂದ್ರಕಲಾ ಬ ಕಟ್ಟಿಮನಿ | ಸದಸ್ಯರು | |
| 4 | ಶ್ರೀ ವೆಂಕಟೇಶ ಬಿ ಬಾಲಯ್ಯಾ | ಸದಸ್ಯರು | [signature] |
| 5 | ಶ್ರೀ ಮಲ್ಲಿಕಾರ್ಜುನ ಕೆ ಸುಂಕದವರ | ಸದಸ್ಯರು | |
| 6 | ಶ್ರೀ ಬಿಸಪ್ಪಾ ಬಿ ದಳವಿ | ಸದಸ್ಯರು | [signature] |
| 7 | ಶ್ರೀಮತಿ ಆನಂದಿ ಡಿ ಸರಮಳಕರ | ಸದಸ್ಯರು | ಆನಂದಿ |
| 8 | ಶ್ರೀಮತಿ ರೇಣುಕಾ ಅ ಬಳ್ಳೊಡಿ | ಸದಸ್ಯರು | ರೇಣುಕಾ |